## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 422 (563) |
| ಸದಸ್ಯರ ಹೆಸರು | : | ಶ್ರೀಮತಿ ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21.02.2022 |
| ಉತ್ತರಿಸುವವರು | : | ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಹುಲಿ ದಾಳಿಯಿಂದ ಮೃತಪಟ್ಟ ಜಾನುವಾರುಗಳ ಮಾಲೀಕರಿಗೆ ನೀಡುತ್ತಿರುವ ಪರಿಹಾರದ ಮೊತ್ತ ಅಲ್ಪ ಪ್ರಮಾಣದಲ್ಲಿ ಇರುವುದರಿಂದ, ಆ ರೈತರು ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವನ್ಯ ಪ್ರಾಣಿಗಳ ದಾಳಿಯಿಂದ ಮೃತಪಟ್ಟ ಜಾನುವಾರುಗಳ ಮಾಲೀಕರಿಗೆ ಈ ಕೆಳಕಂಡಂತೆ ಪರಿಹಾರ ಧನವನ್ನು ಪಾವತಿಸಲಾಗುತ್ತಿದೆ:-<br>➢ ವನ್ಯ ಪ್ರಾಣಿಗಳ ದಾಳಿಯಿಂದ ಉಂಟಾಗುವ ಸಾಕುಪ್ರಾಣಿ ಹತ್ಯೆ ಪ್ರಕರಣಗಳಲ್ಲಿ ಆದೇಶ ಸಂಖ್ಯೆ: ಅಪಜೀ-109-ಎಫ್‌ಎಪಿ-2014, ದಿನಾಂಕ: 13/08/2014ರನ್ವಯ ಕುರಿ, ಮೇಕೆ ಮೃತ ಪಟ್ಟಲ್ಲಿ ರೂ.5,000/-ಗಳ ದಯಾತ್ಮಕ ಧನವನ್ನು ಪಾವತಿಸಲಾಗುತ್ತಿದೆ.<br>➢ ಸರ್ಕಾರದ ಆದೇಶ ಸಂಖ್ಯೆ:-ಅಪಜೀ-109-ಎಫ್‌ಎಪಿ-2014, ದಿನಾಂಕ: 13/08/2014ರನ್ವಯ ಹಸು, ಎತ್ತು, ಎಮ್ಮೆ ಮತ್ತು ಕೋಣ ಮೃತಪಟ್ಟಲ್ಲಿ ಪಾವತಿಸಲಾಗುತ್ತಿದ್ದ ರೂ.10,000/-ಗಳ ದಯಾತ್ಮಕ ಧನವನ್ನು ಪರಿಷ್ಕರಿಸಿ ಸರ್ಕಾರದ ಆದೇಶ ಸಂಖ್ಯೆ: ಅಪಜೀ 144 ಎಫ್‌ಎಪಿ 2020, ದಿನಾಂಕ:20-04-2021 ರನ್ವಯ ಎಸ್. ಡಿ. ಆರ್. ಎಫ್. (State Disaster Response Fund)ರಲ್ಲಿನ ದರಗಳಂತೆ 2021-22ನೇ ಸಾಲಿನಿಂದ ಜಾರಿಗೆ ಬರುವಂತೆ ರೂ.30,000/-ಗಳ ಗರಿಷ್ಠ ಮೊತ್ತವನ್ನು ಪಾವತಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಹುಲಿ ದಾಳಿಯಿಂದ ಎಷ್ಟು ಜಾನುವಾರುಗಳು ಮೃತಪಟ್ಟಿವೆ; ಸದರಿ ಪ್ರಕರಣಗಳಲ್ಲಿ ರೈತರಿಗೆ ವಿತರಿಸಿರುವ ಪರಿಹಾರದ ಮೊತ್ತ ಎಷ್ಟು; (ಪ್ರಕರಣವಾರು ವಿವರ ನೀಡುವುದು) | ಕಳೆದ 3 ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಹುಲಿ ದಾಳಿಯಿಂದ ಉಂಟಾದ ಸಾಕು ಪ್ರಾಣಿಗಳ ಪ್ರಾಣಹಾನಿ ಪ್ರಕರಣಗಳ ಹಾಗೂ ವಿತರಿಸಲಾದ ಪರಿಹಾರ ಧನದ ವಿವರ ಈ ಕೆಳಕಂಡಂತಿದೆ:- |

| ವರ್ಷ | ಸಾಕುಪ್ರಾಣಿ ಪ್ರಾಣ ಹಾನಿ | |
|---|---|---|
| | ಪ್ರಕರಣಗಳ ಸಂಖ್ಯೆ | ಮೊತ್ತ (ರೂ.ಗಳಲ್ಲಿ) |
| 2018-19 | 46 | 4,28,500/- |
| 2019-20 | 55 | 5,70,000/- |
| 2020-21 | 77 | 8,70,000/- |
| 2021-22 (31.01.2022ರ ಅಂತ್ಯದವರೆಗೆ) | 31 | 8,90,000/- |

.....2

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಹುಲಿ ದಾಳಿಯಿಂದ ಜಾನುವಾರುಗಳು ಮೃತಪಟ್ಟಾಗ ಈಗ ವಿತರಿಸುತ್ತಿರುವ ಅಲ್ಪ ಪ್ರಮಾಣದ ಪರಿಹಾರದ ಬದಲು ಮೃತಪಟ್ಟ ಜಾನುವಾರುವಿನ ಅಂದಿನ ಮಾರುಕಟ್ಟೆ ಮೌಲ್ಯದ ಬೆಲೆಗೆ ಸಮಾನವಾಗಿ ಪರಿಹಾರ ನೀಡಲು ಸರ್ಕಾರ ಕೂಡಲೇ ಕ್ರಮ ತೆಗೆದುಕೊಳ್ಳುವುದೇ? | ಹುಲಿ ದಾಳಿಯಿಂದ ಜಾನುವಾರುಗಳು ಮೃತಪಟ್ಟಾಗ ಈಗ ವಿತರಿಸುತ್ತಿರುವ ಅಲ್ಪ ಪ್ರಮಾಣದ ದಯಾತ್ಮಕ ಧನದ ಬದಲು ಮೃತಪಟ್ಟ ಜಾನುವಾರುವಿನ ಅಂದಿನ ಮಾರುಕಟ್ಟೆ ಮೌಲ್ಯದ ಬೆಲೆಗೆ ಸಮಾನವಾಗಿ ದಯಾತ್ಮಕ ಧನ ನೀಡುವ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: ಅಪಜೀ 25 ಎಫ್‌ಡಬ್ಲ್ಯೂಎಲ್ 2022

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು